## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2022-23 ನೇ ಸಾಲಿನ ಆಯವ್ಯಯ ಕಂಡಿಕೆ-156 ರಲ್ಲಿ ಘೋಷಣೆಯಂತೆ ವಿದ್ಯಾರ್ಥಿನಿಲಯಗಳಲ್ಲಿ ನಿಲಯವಾರು ಅರ್ಜಿಗಳನ್ನು ಸ್ವೀಕರಿಸುವ ಬದಲು ತಾಲ್ಲೂಕುವಾರು ಅರ್ಜಿಗಳನ್ನು ಆಹ್ವಾನಿಸಿ, ಸಿ.ಇ.ಟಿ ಕೌನ್ಸಿಲಿಂಗ್ ಮಾದರಿಯಲ್ಲಿ ಪ್ರವೇಶ ಕಲ್ಪಿಸುವ ಕುರಿತು.

**ಓದಲಾಗಿದೆ:**
1. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರ ಪತ್ರ ಸಂಖ್ಯೆ: ಸಕನಿ/ಇಡಿ-4/ಸಿಆರ್-39/2021-22, ದಿನಾಂಕ :18-03-2022
2. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು ಇವರ ಪತ್ರ ಸಂಖ್ಯೆ:ಪವಕನಿ/ಇಡಿ-2/ಸಿಆರ್-110/2021-22, ದಿನಾಂಕ: 07-03-2022

*****

**ಪ್ರಸ್ತಾವನೆ:-**

2022-23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-156 ರಲ್ಲಿ ಸಮಾಜ ಕಲ್ಯಾಣ ಇಲಾಖೆ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಗೆ ಸಂಬಂಧಿಸಿದಂತೆ ಈ ಕೆಳಕಂಡಂತೆ ಘೋಷಣೆ ಮಾಡಲಾಗಿರುತ್ತದೆ.

**"ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ವಿದ್ಯಾರ್ಥಿನಿಲಯಗಳಲ್ಲಿ ಬೇಡಿಕೆ ಮತ್ತು ಹಂಚಿಕೆಯನ್ನು ಸರಿದೂಗಿಸುವ ಉದ್ದೇಶದಿಂದ ನಿಲಯವಾರು ಅರ್ಜಿಗಳನ್ನು ಸ್ವೀಕರಿಸುವ ಬದಲು ತಾಲ್ಲೂಕುವಾರು ಅರ್ಜಿಗಳನ್ನು ಆಹ್ವಾನಿಸಿ, ವಿದ್ಯಾರ್ಥಿನಿಲಯಗಳಲ್ಲಿ ಸಿ.ಇ.ಟಿ ಕೌನ್ಸಿಲಿಂಗ್ ಮಾದರಿಯಲ್ಲಿ ಪ್ರವೇಶ ಕಲ್ಪಿಸಲಾಗುವುದು".**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಪರಿಶಿಷ್ಟ ಜಾತಿಯ 1231 ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳನ್ನು ಹಾಗೂ 636 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ನಿರ್ವಹಿಸಲಾಗುತ್ತಿದೆ. ಪ್ರಸ್ತುತ ಇಲಾಖೆಯ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ 2013-14ನೇ ಸಾಲಿನ ಆಯವ್ಯಯ ಘೋಷಣೆಯಂತೆ ದಿನಾಂಕ:20-07-2013 ರ ಸರ್ಕಾರದ ಸುತ್ತೋಲೆಯನ್ವಯ ಪ್ರವೇಶ ಕೋರಿ ಅರ್ಜಿ ಸಲ್ಲಿಸುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಎಲ್ಲಾ ಅರ್ಹ ವಿದ್ಯಾರ್ಥಿಗಳಿಗೂ ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶ ಕಲ್ಪಿಸಲಾಗುತ್ತಿದೆ.

--2

ಮುಂದುವರೆದು. ದಿನಾಂಕ:25-08-2018 ರ ಆದೇಶದಲ್ಲಿ ಇಲಾಖೆಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿನಿಲಯಗಳಲ್ಲಿ ಹಿಂದುಳಿದ ವರ್ಗಗಳ ಹಾಗೂ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಗೆ ಶೇಕಡ 25 ರಷ್ಟು ಸ್ಥಾನಗಳನ್ನು ಮೀಸಲಿರಿಸಲು ಆದೇಶಿಸಲಾಗಿದೆ. ಪ್ರಸ್ತುತ ಶೇಕಡ 25% ರಷ್ಟು ಅನುಪಾತ ಕೆಳಕಂಡಂತಿದೆ.

| | |
|---|---|
| ಬಿ.ಸಿ - ಪ್ರವರ್ಗ-1 | 3% |
| ಪ್ರವರ್ಗ - 2ಎ | 12% |
| ಪ್ರವರ್ಗ- 2ಬಿ | 3% |
| ಪ್ರವರ್ಗ- 3ಎ | 3% |
| ಪ್ರವರ್ಗ-3ಬಿ | 4% |
| **ಒಟ್ಟು** | **25%** |

ಅದರಂತೆ, ಇಲಾಖೆಯ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶ ಕೋರಿ ಅರ್ಜಿ ಸಲ್ಲಿಸುವ ಎಲ್ಲಾ ಅರ್ಹ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಅವರ ಇಚ್ಛೆಯಂತೆ ಸದರಿ ವಿದ್ಯಾರ್ಥಿನಿಲಯಗಳಲ್ಲಿಯೇ ಪ್ರವೇಶ ಕಲ್ಪಿಸಲಾಗುತ್ತಿದ್ದು, ಶೇಕಡ 25%ರಷ್ಟು ಮೀಸಲಿರುವ ಹಿಂದುಳಿದ ವರ್ಗ ಮತ್ತು ಅಲ್ಪಸಂಖ್ಯಾತರ ಇಲಾಖೆಯ ವಿದ್ಯಾರ್ಥಿಗಳಿಂದ ಹೆಚ್ಚಿನ ಬೇಡಿಕೆ ಇರುತ್ತದೆಂದು ಸಮಾಜ ಕಲ್ಯಾಣ ಇಲಾಖೆಯ ವಿದ್ಯಾರ್ಥಿನಿಲಯಗಳಲ್ಲಿ ನಿಲಯವಾರು ಅರ್ಜಿಗಳನ್ನು ಸ್ವೀಕರಿಸುವ ಬದಲು ತಾಲ್ಲೂಕುವಾರು ಅರ್ಜಿಗಳನ್ನು ಆಹ್ವಾನಿಸಿ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳಲ್ಲಿ ಮಾಡುತ್ತಿರುವ ಪ್ರವೇಶದ ಮಾನದಂಡಗಳಂತೆ ಸಿ.ಇ.ಟಿ ಕೌನ್ಸಿಲಿಂಗ್ ಮಾದರಿಯಲ್ಲಿ ಪ್ರವೇಶ ಕಲ್ಪಿಸಲು ಆದೇಶ ಹೊರಡಿಸುವಂತೆ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರು ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಪರಿಶಿಷ್ಟ ಪಂಗಡದ 136 ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳು ಮತ್ತು 134 (15 ಹೊಸ ವಿದ್ಯಾರ್ಥಿನಿಲಯಗಳು ಸೇರಿದಂತೆ) ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿದ್ದು, ಈ ವಿದ್ಯಾರ್ಥಿನಿಲಯಗಳಿಗೆ ಪ್ರವೇಶಾವಕಾಶ ಕಲ್ಪಿಸಲು ಈ ಕೆಳಕಂಡಂತೆ ವರ್ಗವಾರು ಮೀಸಲಾತಿಯನ್ನು ನಿಗದಿಪಡಿಸಲಾಗಿದೆ.

| ಕ್ರ.ಸಂ | ವರ್ಗ | ಮೀಸಲಾತಿ ಶೇಕಡವಾರು |
|---|---|---|
| 1 | ಪರಿಶಿಷ್ಟ ಪಂಗಡ ಜಾತಿ | 75% |
| 2 | ಪ್ರ.ವರ್ಗ -1 | 3% |
| 3 | ಪ್ರ.ವರ್ಗ-2ಎ | 12% |
| 4 | ಪ್ರ.ವರ್ಗ-2ಬಿ | 3% |
| 5 | ಪ್ರ.ವರ್ಗ-3ಎ | 3% |
| 6 | ಪ್ರ.ವರ್ಗ-3ಬಿ | 4% |
| | **ಒಟ್ಟು** | **100%** |

---3

ಅದರಂತೆ, ಪ್ರಸ್ತುತ, ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿಗೆ ಪ್ರವೇಶಕ್ಕಾಗಿ ಆನ್ ಲೈನ್ ನಲ್ಲಿ ನಿಲಯವಾರು ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಿದ್ದು, ಅದರಂತೆ ನಿಯಮಾನುಸಾರ ಪ್ರವೇಶಾವಕಾಶ ಕಲ್ಪಿಸಲಾಗುತ್ತಿದೆ. ಆಯವ್ಯಯ ಘೋಷಣೆಯಂತೆ ಪರಿಶಿಷ್ಟ ವರ್ಗದ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ತಾಲ್ಲೂಕುವಾರು ಅರ್ಜಿಗಳನ್ನು ಆಹ್ವಾನಿಸಿ, ವಿದ್ಯಾರ್ಥಿನಿಲಯಗಳಲ್ಲಿ ಸಿ.ಇ.ಟಿ ಕೌನ್ಸಿಲಿಂಗ್ ಮಾದರಿಯಲ್ಲಿ ಪ್ರವೇಶ ಕಲ್ಪಿಸಲು ಆದೇಶ ಹೊರಡಿಸುವಂತೆ ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ರವರು ಕೋರಿರುತ್ತಾರೆ.

ಈ ಮೇಲ್ಕಂಡ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ, 2022-23 ನೇ ಆಯವ್ಯಯ ಭಾಷಣದ ಕಂಡಿಕೆ-156 ರನ್ವಯ ಸಮಾಜ ಕಲ್ಯಾಣ ಇಲಾಖೆ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿನಿಲಯಗಳಲ್ಲಿ ನಿಲಯವಾರು ಅರ್ಜಿಗಳನ್ನು ಸ್ವೀಕರಿಸುವ ಬದಲು ತಾಲ್ಲೂಕುವಾರು ಅರ್ಜಿಗಳನ್ನು ಆಹ್ವಾನಿಸಿ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳಲ್ಲಿ ಮಾಡುತ್ತಿರುವ ಪ್ರವೇಶದ ಮಾನದಂಡಗಳಂತೆ ಸಿ.ಇ.ಟಿ ಕೌನ್ಸಿಲಿಂಗ್ ಮಾದರಿಯಲ್ಲಿ ಪ್ರವೇಶ ಕಲ್ಪಿಸಲು ನಿರ್ಧರಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶಸಂಖ್ಯೆ:ಸಕಇ 190 ಪಕವಿ 2022, ಬೆಂಗಳೂರು**
**ದಿನಾಂಕ:11-04-2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳಂತೆ, 2022-23 ನೇ ಆಯವ್ಯಯ ಭಾಷಣದ ಕಂಡಿಕೆ-156 ರನ್ವಯ ಸಮಾಜ ಕಲ್ಯಾಣ ಇಲಾಖೆ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿನಿಲಯಗಳಲ್ಲಿ ನಿಲಯವಾರು ಅರ್ಜಿಗಳನ್ನು ಸ್ವೀಕರಿಸುವ ಬದಲು ತಾಲ್ಲೂಕುವಾರು ಅರ್ಜಿಗಳನ್ನು ಆಹ್ವಾನಿಸಿ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳಲ್ಲಿ ಮಾಡುತ್ತಿರುವ ಪ್ರವೇಶದ ಮಾನದಂಡಗಳಂತೆ ಸಿ.ಇ.ಟಿ ಕೌನ್ಸಿಲಿಂಗ್ ಮಾದರಿಯಲ್ಲಿ ಪ್ರವೇಶ ಕಲ್ಪಿಸಲು ಅನುಮೋದನೆ ನೀಡಿ ಆದೇಶಿಸಿದೆ.

ಪ್ರಸಕ್ತ ಸಾಲಿಗೆ ಒದಗಿಸಿರುವ ಅನುದಾನದ ಮಿತಿಯಲ್ಲಿಯೇ ಪ್ರಸ್ತಾವನೆಗೆ ಸಂಬಂಧಿಸಿದ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಚಾಲ್ತಿಯಲ್ಲಿರುವ ಆರ್ಥಿಕ ಅಧಿಕಾರ ಪ್ರತ್ಯಾಯೋಜನೆಯಂತೆ ಕ್ರಮ ವಹಿಸುವುದು ಹಾಗೂ ಪ್ರಸಕ್ತ ಸಾಲಿಗೆ ಒದಗಿಸಿರುವ ಅನುದಾನದ ಮಿತಿಯಲ್ಲಿಯೇ ಕಾರ್ಯಕ್ರಮಗಳನ್ನು ಜಾರಿಗೊಳಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 225 ವೆಚ್ಚ-3/2022, ದಿನಾಂಕ:07-04-2022 ಮತ್ತು ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಪಿಡಿಎಸ್ 22 ಐಎಂಎಂ 2022, ದಿನಾಂಕ:04-04-2022 ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಡಾ: ಪ್ರಜ್ಞಾ ಅಮ್ಮೆಂಬಳ)
ಸರ್ಕಾರದ ಉಪ ಕಾರ್ಯದರ್ಶಿ-1,
ಸಮಾಜ ಕಲ್ಯಾಣ ಇಲಾಖೆ

**ಇವರಿಗೆ:-**

1. ಮಹಾಲೇಖಪಾಲರು, (ಎ&ಇ, ಲೆಕ್ಕಪರಿಶೋಧನೆ-1 ಮತ್ತು 2), ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು.
4. ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
5. ಮಾನ್ಯ ಪರಿಶಿಷ್ಟ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ
7. ಸರ್ಕಾರದ ಉಪ ಕಾರ್ಯದರ್ಶಿ-1 ಮತ್ತು 2 ಸಮಾಜ ಕಲ್ಯಾಣ ಇಲಾಖೆ ರವರ ಆಪ್ತ ಸಹಾಯಕರು, ವಿಕಾಸಸೌಧ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

*****